# ಮೂರೂ ಕ್ಷೇತ್ರಗಳಲ್ಲಿ ಗೆಲುವು

ವಿ.ವಾ. 7-4-21

## ಯಡಿಯೂರಪ್ಪ ವಿಶ್ವಾಸ | ಮುತ್ನಾಳ ಹಿರೇಮಠಕ್ಕೆ ಭೇಟಿ, ದರ್ಶನಾಶೀರ್ವಾದ



ಬೆಳಗಾವಿ ತಾಲೂಕಿನ ಹಲಗಾದ 108 ಸಿದ್ಧಸೇನಾ ಮುನಿ ಅವರರನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಂಗಳವಾರ ಭೇಟಿ ಮಾಡಿ ದರ್ಶನಾಶೀರ್ವಾದ ಪಡೆದರು. ಸಚಿವರಾದ ಜಗದೀಶ್ ಶೆಟ್ಟರ್, ಉಮೇಶ ಕತ್ತಿ ಇತರರಿದ್ದರು.

■ ವಿಜಯವಾಣಿ ಸುದ್ದಿಜಾಲ ಹಿರೇಬಾಗೇವಾಡಿ

ಬೆಳಗಾವಿ ಲೋಕಸಭಾ ಸೇರಿ ಮಸ್ಕಿ ಹಾಗೂ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಪರ ವಾತಾವರಣ ಇದ್ದು, ಮೂರೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲುವು ಸಾಧಿಸುತ್ತದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು. ಬೆಳಗಾವಿ ಲೋಕಸಭಾ ಉಪ ಚುನಾವಣೆಯಲ್ಲಿ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿ ಮಂಗಲ ಅಂಗಡಿ ಪರ ಪ್ರಚಾರಾರ್ಥವಾಗಿ ಬೆಳಗಾವಿಗೆ ಭೇಟಿ ನೀಡುವ ಸಂದರ್ಭ ಸಮೀಪದ ಮುತ್ನಾಳದ ಹಿರೇಮಠಕ್ಕೆ ಭೇಟಿ ನೀಡಿ ಶಿವಾನಂದ ಶಿವಾಚಾರ್ಯ ಸ್ವಾಮೀಜಿಗಳ ದರ್ಶನಾಶೀರ್ವಾದ ಪಡೆದ ಸಿಎಂ, ಬಳಿಕ ಮಾತನಾಡಿದರು. ಬೆಳಗಾವಿಯಲ್ಲಿ ಮಂಗಲ ಅಂಗಡಿ ಅತಿ ಹೆಚ್ಚು ಮತಗಳಿಂದ ಗೆಲುವು ಸಾಧಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಬಿ.ವೈ.ವಿಜಯೇಂದ್ರ ಹಣದ ಹೊಳೆ ಹರಿಸುತ್ತಿದ್ದಾರೆಂಬ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ಕಾಂಗ್ರೆಸ್‌ನವರಿಗೆ ಸೋಲಿನ ಭಯ ಕಾಡುತ್ತಿದೆ. ಹಾಗಾಗಿ ಆರೋಪ ಮಾಡುತ್ತಿದ್ದಾರೆ ಎಂದು ಹೇಳಿದರು.

### ಪೂರ್ಣಾವಧಿಗೆ ನೀವೇ ಸಿಎಂ

'ನೀವು ಮುಖ್ಯಮಂತ್ರಿಯಾಗಿ ಪೂರ್ಣಾವಧಿ ಪೂರೈಸುತ್ತೀರಿ. ಚಿಂತೆ ಬಿಡಿ. ಭವಿಷ್ಯದಲ್ಲಿ ರಾಜ್ಯಪಾಲ, ಉಪ ರಾಷ್ಟ್ರಪತಿ ಅಥವಾ ರಾಷ್ಟ್ರಪತಿ ಆಗುತ್ತೀರಿ ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ಬೆಳಗಾವಿ ತಾಲೂಕಿನ ಹಲಗಾದ 108 ಸಿದ್ಧಸೇನಾ ಮುನಿ ಆಶೀರ್ವಾದ ಮಾಡಿದರು. ಪ್ರಚಾರಕ್ಕೆ ಆಗಮಿಸಿದ ವೇಳೆ ಮುನಿಗಳನ್ನು ಭೇಟಿಯಾಗಿ ದರ್ಶನಾಶೀರ್ವಾದ ಪಡೆದ ಸಿಎಂ, ಉಪ ಚುನಾವಣೆಯಲ್ಲಿ ಗೆಲ್ಲುವ ಬಗ್ಗೆ ಹೇಳಿ ಎಂದು ಮುನಿಗಳನ್ನು ಕೇಳಿದರು. ಅದಕ್ಕೆ ಪ್ರತಿಕ್ರಿಯಿಸಿದ ಮುನಿಗಳು, 40 ಸಾವಿರ ಮತಗಳ ಅಂತರದಿಂದ ಮಂಗಲ ಅಂಗಡಿ ಗೆಲ್ಲುತ್ತಾರೆ ಎಂದು ಭವಿಷ್ಯ ನುಡಿದರು.

## ಸಾಲ ಮಾಡಿ ಸ್ಯಾಲರಿ ನೀಡುತ್ತಿರುವ ಸರ್ಕಾರ



ರಾಯಚೂರು: ನೌಕರರಿಗೆ ಸಂಬಳ ಕೊಡಲು ಆಗದಷ್ಟು ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ. ಸಾಲ ತಂದು ಸಂಬಳ ನೀಡುವಂತಹ ದುಸ್ಥಿತಿಗೆ ತಲುಪಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಮಸ್ಕಿ ತಾಲೂಕಿನ ಪಾಮನಕಲ್ಲೂರು ಬಳಿ ಎನ್ಆರ್‌ಬಿಸಿ 5ಎ ಕಾಲುವೆ ಅನುಷ್ಠಾನಕ್ಕೆ ಒತ್ತಾಯಿಸಿ ರೈತರು ನಡೆಸುತ್ತಿರುವ ಧರಣಿ ಸ್ಥಳಕ್ಕೆ ಮಂಗಳವಾರ ಭೇಟಿ ನೀಡಿ ಮಾತನಾಡಿದ ಅವರು, ಹಣಕಾಸು ಪರಿಸ್ಥಿತಿ ನಿರ್ವಹಣೆಯಲ್ಲಿ ಸರ್ಕಾರ ಎಡವಿದೆ. 70 ಸಾವಿರ ಕೋಟಿ ರೂ. ಸಾಲ ಪಡೆದು ಸಂಬಳ ಪಾವತಿಸಿದೆ ಎಂದರು. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಮಾತನಾಡಿ, ಸಿದ್ದರಾಮಯ್ಯ ಸಿಎಂ ಆಗಿದ್ದಾಗ ನಾನು ನೀರಾವರಿ ಸಚಿವನಾಗಿದ್ದೆ. ಆಗ ಪ್ರತಾಪಗೌಡ ಪಾಟೀಲ್ ಒಂದು ಬಾರಿಯೂ 5ಎ ಕಾಲುವೆ ನಿರ್ಮಾಣದ ಬಗ್ಗೆ ಬಂದು ಮಾತನಾಡಿಲ್ಲ. ಯೋಜನೆ ಬಗ್ಗೆ ಅಧ್ಯಯನ ನಡೆಸಲಾಗುವುದು ಎಂದು ಹೇಳಿದರು.

ಜಮೀನಿನಲ್ಲಿ ಕೂಲಿ ಮಾಡುವ ಹೆಣ್ಣು ಮಕ್ಕಳು ಕಾಂಗ್ರೆಸ್ ಅಭ್ಯರ್ಥಿ ಬಸನಗೌಡ ತುರ್ವಿಹಾಳಗೆ 51 ಸಾವಿರ ರೂ. ದೇಣಿಗೆ ನೀಡಿದ್ದಾರೆ. ಇದು ಸಂತೋಷ ತಂದಿದೆ.
| ಡಿ.ಕೆ.ಶಿವಕುಮಾರ ಕೆಪಿಸಿಸಿ ಅಧ್ಯಕ್ಷ

ಮಸ್ಕಿ ಕ್ಷೇತ್ರದ ನೀರಾವರಿ ಯೋಜನೆಗಳ ಅನುಷ್ಠಾನದ ವಿಳಂಬಕ್ಕೆ ಕಾಂಗ್ರೆಸ್ ಕಾರಣ. 5ಎ ನಾಲೆ ಕುರಿತಾಗಿ ಸಿಎಂ ಗಮನಕ್ಕಿದೆ. ಮುಂದಿನ ದಿನಗಳಲ್ಲಿ ನೀರು ಸಿಗುವುದರಲ್ಲಿ ಸಂಶಯವಿಲ್ಲ.
| ಬಿ.ವೈ.ವಿಜಯೇಂದ್ರ ಬಿಜೆಪಿ ರಾಜ್ಯ ಉಪಾಧ್ಯಕ್ಷ

## ಬಿಎಸ್‌ವೈ-ಈಶ್ವರಪ್ಪ ಸಂಧಾನ ಗೊತ್ತಿಲ್ಲ



ಬೆಂಗಳೂರು: ಸಿಎಂ ಯಡಿಯೂರಪ್ಪ ಹಾಗೂ ಸಚಿವ ಕೆ.ಎಸ್. ಈಶ್ವರಪ್ಪ ಮಧ್ಯೆ ರಾಜಿ ಸಂಧಾನದ ಪ್ರಯತ್ನಗಳ ಬಗ್ಗೆ ಗೊತ್ತಿಲ್ಲ. ಉಪ ಚುನಾವಣೆ ಪ್ರಚಾರಕ್ಕಾಗಿ ಬಿಜೆಪಿ ರಾಜ್ಯ ಉಸ್ತುವಾರಿ ಅರುಣ್ ಸಿಂಗ್ ಬರುತ್ತಿದ್ದಾರೆ ಎಂದು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಸ್ಪಷ್ಟಪಡಿಸಿದರು. ರಾಜ್ಯ ಪ್ರವಾಸದ ವೇಳೆ ಇಬ್ಬರೊಂದಿಗೆ ಸಿಂಗ್ ಮಾತುಕತೆ ನಡೆಸಿ ಮನಸ್ತಾಪ ಬಗೆಹರಿಸಲಿದ್ದಾರೆಯೇ? ಎಂಬುದನ್ನು ನೀವು (ಪತ್ರಕರ್ತರು) ಅರುಣ್ ಸಿಂಗ್ ಅವರಿಗೆ ಕೇಳಬೇಕು ಎಂದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ರಾಜ್ಯಪಾಲರಿಗೆ ಈಶ್ವರಪ್ಪ ಪತ್ರ ಬರೆದಿದ್ದಾರೆ. ವರಿಷ್ಠರಿಗೂ ಮತ್ತೊಂದು ಪತ್ರ ಬರೆಯಲಿದ್ದಾರೆ ಎನ್ನುವ ಊಹಾಪೋಹಗಳಿಗೆ ಉತ್ತರಿಸುವುದಿಲ್ಲ ಎಂದು ಸಿ.ಟಿ.ರವಿ ನಯವಾಗಿಯೇ ನಿರಾಕರಿಸಿದರು. 3 ಕ್ಷೇತ್ರಗಳ ಉಪ ಚುನಾವಣೆಗೆ ಎಲ್ಲ ಸಚಿವರು, ಮುಖಂಡರಿಗೆ ನಿರ್ದಿಷ್ಟವಾದ ಜವಾಬ್ದಾರಿ ನೀಡಿದ್ದು, ಪ್ರಚಾರ ಕಾರ್ಯದಲ್ಲಿ ಎಲ್ಲರೂ ಆಸಕ್ತಿಯಿಂದ ಭಾಗವಹಿಸಿದ್ದಾರೆ. ಬಾಲಚಂದ್ರ ಜಾರಕಿಹೊಳಿ ಪ್ರಚಾರದಿಂದ ದೂರವಿರುವ ಬಗ್ಗೆ ವೈಯಕ್ತಿಕ ಮಾಹಿತಿಯಿಲ್ಲ ಎಂದು ರವಿ ಪ್ರತಿಕ್ರಿಯಿಸಿದರು.

## ಸಮರೋಪಾದಿಯಲ್ಲಿ ತೊಡಗಿಸಿಕೊಳ್ಳಲು ಕರೆ

ಬೆಂಗಳೂರು: ಉಪ ಚುನಾವಣೆಗೆ ಸಮರೋಪಾದಿಯಲ್ಲಿ ಎಲ್ಲರೂ ತೊಡಗಿಸಿಕೊಳ್ಳಬೇಕು ಎಂದು ಕಟ್ಟುನಿಟ್ಟಿನ ಕರೆ ನೀಡಿರುವ ಸಿಎಂ ಯಡಿಯೂರಪ್ಪ, ಪ್ರಚಾರದಲ್ಲಿ ತೊಡಗಿಸಿಕೊಂಡವರ ವಿವರ ಕೇಳಿದ್ದಾರೆ. ಪ್ರತಿ ಕ್ಷೇತ್ರದಲ್ಲಿ ಯಾರ್ಯಾರಿಗೆ ಯಾವ್ಯಾವ ಉಸ್ತುವಾರಿ ಮತ್ತು ಜವಾಬ್ದಾರಿ ನೀಡಲಾಗಿದೆಯೋ ಅದೇ ರೀತಿ ಶಾಸಕರು, ಸಚಿವರು ಪ್ರಚಾರದಲ್ಲಿ ತೊಡಗಿಸಿಕೊಳ್ಳುತ್ತಿಲ್ಲ ಎಂಬ ದೂರುಗಳ ಹಿನ್ನೆಲೆಯಲ್ಲಿ ಸಚಿವರಿಗೆ ಎಚ್ಚರಿಕೆ ಸಂದೇಶ ರವಾನಿಸಿದ್ದಾರೆ. ಕೆಲ ಸಚಿವರು ಸೂಚನೆ ನಿರ್ಲಕ್ಷಿಸಿ, ಬೇರೆ ಕಾರ್ಯಕ್ರಮಗಳಿಗೆ ಪಾಲ್ಗೊಳ್ಳಲು ತೆರಳುತ್ತಿರುವುದು ಗಮನಕ್ಕೆ ಬಂದಿದೆ. ಇನ್ನುಳಿದಿರುವ ದಿನಗಳಲ್ಲಿ ವಿನಾ ಕಾರಣ ಕುಂಟು ನೆಪ ಹೇಳದೆ, ಪ್ರಚಾರದಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಾಕೀತು ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ.